**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಇವರು ನಿಯಮ 72ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:107ಕ್ಕೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಉತ್ತರ.**

ಪ್ರಶ್ನೆ:

**ಕರಾವಳಿಯ, ಉಡುಪಿ ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳು ಸೇರಿದಂತೆ ಸರ್ಕಾರಿ ಬಸ್ ಸೌಲಭ್ಯಗಳಿಲ್ಲದ ಜಿಲ್ಲೆಗಳಲ್ಲಿ ಹೆಚ್ಚುವರಿ ಸರ್ಕಾರಿ ಬಸ್ ಸೌಲಭ್ಯ ಕಲ್ಪಿಸುವುದು ಹಾಗೂ ಸರ್ಕಾರಿ ಬಸ್ ಸೌಲಭ್ಯ ಕಲ್ಪಿಸುವವರೆಗೆ ಖಾಸಗಿ ಬಸ್‌ಗಳಲ್ಲಿಯೂ ಶಕ್ತಿ ಯೋಜನೆಯಡಿ ಮಹಿಳಾ ಪ್ರಯಾಣಿಕರಿಗೆ ಉಚಿತ ಬಸ್ ಪ್ರಯಾಣ ಕಲ್ಪಿಸಲು ಒತ್ತಾಯಿಸಿ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.**

**ಉತ್ತರ:**

**ಕ.ರಾ.ರ.ಸಾ.ನಿಗಮ:-**

ಕ.ರಾ.ರ.ಸಾ.ನಿಗಮದಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ ಹಾಗೂ 07 ವರ್ಷಗಳಿಂದ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.

ಕ.ರಾ.ರ.ಸಾ.ನಿಗಮದ ಆಡಳಿತ ವ್ಯಾಪ್ತಿಯ ಕರಾವಳಿಯ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಮಂಗಳೂರು ಮತ್ತು ಪುತ್ತೂರು ವಿಭಾಗಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ವಿಭಾಗಗಳ ವ್ಯಾಪ್ತಿಯ 10 ಘಟಕಗಳಿಂದ ಕರಾವಳಿಯ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಿಗೆ ಒಟ್ಟು 974 ಅನುಸೂಚಿಗಳಿಂದ 4143 ಸುತ್ತುವಳಿಗಳಲ್ಲಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ.

ಉಡುಪಿ ಜಿಲ್ಲೆಯಲ್ಲಿನ 267 ಗ್ರಾಮಗಳ ಪೈಕಿ 172 ಗ್ರಾಮಗಳಿಗೆ; ದಕ್ಷಿಣ ಕನ್ನಡ ಜಿಲ್ಲೆಯ 334 ಗ್ರಾಮಗಳ ಪೈಕಿ 238 ಗ್ರಾಮಗಳಿಗೆ ಸಂಚಾರ ದಟ್ಟಣೆ/ಬೇಡಿಕೆಗೆ ಅನುಗುಣವಾಗಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ಉಡುಪಿ ಜಿಲ್ಲೆಯ 95 ಗ್ರಾಮಗಳ ಸಮೀಪದ ಗ್ರಾಮಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. ದಕ್ಷಿಣ ಕನ್ನಡ ಜಿಲ್ಲೆಯ 96 ಗ್ರಾಮಗಳ ಸಮೀಪದ ಗ್ರಾಮಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ.

ನಿಗಮದಿಂದ ಸಾರಿಗೆ ಸೌಲಭ್ಯ ಕಲ್ಪಿಸದ ಹಳ್ಳಿಗಳ ಪೈಕಿ 2138 ಹಳ್ಳಿಗಳು ಈ ಹಿಂದೆ ಸಮಗ್ರ ಪ್ರದೇಶ ಯೋಜನೆಗೂ ಮುನ್ನ ಸಂಪೂರ್ಣವಾಗಿ ರಾಷ್ಟ್ರೀಕೃತವಲ್ಲದ ಖಾಸಗಿ ವಲಯದಲ್ಲಿ ಬರುತ್ತಿತ್ತು. ಈ ಗ್ರಾಮಗಳಿಗೆ ನಿಗಮದ ವತಿಯಿಂದ ಸಾರಿಗೆ ಸೌಲಭ್ಯ ಕಲ್ಪಿಸಲು ಸಂಬಂಧಿಸಿದ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಮತ್ತು ರಾಜ್ಯ ಸಾರಿಗೆ ಪ್ರಾಧಿಕಾರದಲ್ಲಿ ಪರವಾನಿಗೆಯ ಅರ್ಜಿಗಳು ಪರಿಶೀಲನೆಯಲ್ಲಿರುತ್ತದೆ, ಸದರಿ ಪರವಾನಿಗೆಗಳು ಮಂಜೂರಾತಿಯಾದ ನಂತರ ಅವಶ್ಯಕತೆಗನುಗುಣವಾಗಿ ಸಾರಿಗೆಗಳನ್ನು ಆಚರಣೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು / ಜಿ.ಸಿ.ಸಿ ಆಧಾರದ ಮೇಲೆ ಕಾರ್ಯಾಚರಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ:-

- ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಕರ್ನಾಟಕ ಸಾರಿಗೆ ಸಾಮಾನ್ಯ ಮಾದರಿಯ ಒಟ್ಟು 250 ಸಂಖ್ಯೆ ಹೊಸ ವಾಹನಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.6235.44 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- 25 ಹೊಸ ಸಾಮಾನ್ಯ ಕರ್ನಾಟಕ ಸಾರಿಗೆ ಮಾದರಿ ವಾಹನಗಳನ್ನು ಡಿಸೆಂಬರ್-23ರ ಅಂತ್ಯದೊಳಗೆ ಸೇರ್ಪಡೆಗೊಳಿಸಲು ಕ್ರಮ ಜರುಗಿಸಲಾಗಿದೆ.

- 100 ಹೊಸ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಸರಬರಾಜು ಆದೇಶ ನೀಡಿದ್ದು, ಈ ಪೈಕಿ 90 ಬಸ್ಸುಗಳು ಸರಬರಾಜಾಗಿರುತ್ತದೆ.
- 200 ಹೊಸ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಸರಬರಾಜು ಆದೇಶ ನೀಡಲಾಗಿದೆ.
- 40 ಪಲ್ಲಕ್ಕಿ ನಾನ್-ಎ.ಸಿ. ಸ್ಲೀಪರ್ ಬಸ್ಸುಗಳನ್ನು ಖರೀದಿಸಲಾಗಿದೆ.
- 04 ಎ.ಸಿ. ಮತ್ತು 04 ನಾನ್-ಎ.ಸಿ. ಸ್ಲೀಪರ್ ಬಸ್ಸುಗಳನ್ನು ಖರೀದಿಸಲಾಗಿದೆ.
- 300 ಸಂಖ್ಯೆ ವಿದ್ಯುತ್ ಚಾಲಿತ ವಾಹನಗಳನ್ನು ಜಿ.ಸಿ.ಸಿ ಆಧಾರದಲ್ಲಿ ಕಾರ್ಯಾಚರಣೆಗೊಳಿಸಲು ಕ್ರಮ ಜರುಗಿಸಲಾಗುತ್ತಿದ್ದು ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.
- 350 ಸಂಖ್ಯೆ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ.

ನಿಗಮದಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಪ್ರಸ್ತುತ 2000 ಚಾಲಕ-ಕಂ-ನಿರ್ವಾಹಕ ಹುದ್ದೆ ಹಾಗೂ 300 ತಾಂತ್ರಿಕ ಸಹಾಯಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ.

ಸಾರಿಗೆ ಸೌಲಭ್ಯವಿಲ್ಲದ ಗ್ರಾಮಗಳಿಗೆ ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೋಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಸಾರಿಗೆ ಸೌಲಭ್ಯವನ್ನು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

**ವಾ.ಕ.ರ.ಸಾ.ಸಂಸ್ಥೆ:-**

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯಾಪ್ತಿಯ ಉತ್ತರ ಕನ್ನಡ ಜಿಲ್ಲೆಯಲ್ಲಿ 8 ಘಟಕಗಳ 609 ಅನುಸೂಚಿಗಳಿಂದ 4033 ಸರತಿಗಳನ್ನು ಕಾರ್ಯಾಚರಿಸಲಾಗುತ್ತಿದೆ.

ಪ್ರಸಕ್ತ ವರ್ಷದಲ್ಲಿ ಸಂಸ್ಥೆಯಲ್ಲಿನ ಲಭ್ಯವಿರುವ ಸಂಪನ್ಮೂಲಗಳಿಂದ 6 ಅನುಸೂಚಿಗಳನ್ನು ಹೆಚ್ಚಿಸುವುದಲ್ಲದೇ ಗ್ರಾಮೀಣ ಭಾಗದಲ್ಲಿ ಗ್ರಾಮಾಂತರ ಪ್ರದೇಶ ಮತ್ತು ಗ್ರಾಮಾಂತರ ಪ್ರದೇಶದಿಂದ ತಾಲ್ಲೂಕು/ಜಿಲ್ಲಾ ಕೇಂದ್ರಗಳಲ್ಲಿಯ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಅನಾನುಕೂಲವಾಗುವುದನ್ನು ತಪ್ಪಿಸಲು ಒಟ್ಟು 25 ಅಂತರರಾಜ್ಯ ಸಾರಿಗೆಗಳನ್ನು ಸ್ಥಗಿತಗೊಳಿಸಿ, ಸದರಿ ವಾಹನಗಳನ್ನೂ ಸಹ ಉತ್ತರ ಕನ್ನಡ ಜಿಲ್ಲೆ ವ್ಯಾಪ್ತಿಯ ಸಾರ್ವಜನಿಕ ಪ್ರಯಾಣಿಕರಿಗೆ ಸಾರಿಗೆ ಸೌಲಭ್ಯ ಹೆಚ್ಚಿಸುವ ನಿಟ್ಟಿನಲ್ಲಿ ಕಾರ್ಯಾಚರಣೆಗೆ ಬಳಸಿಕೊಂಡು ಒಟ್ಟಾರೆ 249 ಸರತಿಗಳನ್ನು ಹೆಚ್ಚಿಸಿ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಅನುಕೂಲವಾಗುವಂತೆ ವಾಹನಗಳ ಕಾರ್ಯಾಚರಣೆಗೆ ಕ್ರಮವಹಿಸಲಾಗಿದೆ.

ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:-

- 50 ಗ್ರಾಮಾಂತರ ಸಾರಿಗೆ ವಾಹನಗಳನ್ನು ಖರೀದಿಸಲಾಗಿದೆ.
- ಗ್ರಾಮಾಂತರ ಸಾರಿಗೆಯ 285 ಹೊಸ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- ಸರ್ಕಾರದಿಂದ ಸಂಸ್ಥೆಗೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನ ಸುಮಾರು 375 ಸಂಖ್ಯೆ ಗ್ರಾಮಾಂತರ ಸಾರಿಗೆಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- ಡಲ್ಟ್ ಆರ್ಥಿಕ ಸಹಾಯದಿಂದ 100 ನಗರ ಸಾರಿಗೆ ಬಸ್ಸುಗಳ ಖರೀದಿ ಪ್ರಕ್ರಿಯೆ ಸಹ ಜಾರಿಯಲ್ಲಿರುತ್ತದೆ.

➢ 20-ನಾನ್ ಎ/ಸಿ ಸ್ಲೀಪರ್ ಹಾಗೂ 04-ಎ/ಸಿ ಸ್ಲೀಪರ್ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

ಸಂಸ್ಥೆಯಲ್ಲಿ ಪ್ರಸ್ತುತ 2000 ಚಾಲಕ-ಕಂ-ನಿರ್ವಾಹಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ.

ಮುಂಬರುವ ದಿನಗಳಲ್ಲಿ ವಾಹನಗಳು ಮತ್ತು ಚಾಲನಾ ಸಿಬ್ಬಂದಿಗಳ ಲಭ್ಯತೆಗನುಗುಣವಾಗಿ ಉತ್ತರಕನ್ನಡ ಜಿಲ್ಲೆಯಲ್ಲಿ ಬೇಡಿಕೆ/ಅವಶ್ಯಕತೆಗನುಗುಣವಾಗಿ ಅನುಸೂಚಿಗಳನ್ನು ಹೆಚ್ಚಿಸುವ ಮೂಲಕ ಸಾರಿಗೆ ವ್ಯವಸ್ಥೆ ಉತ್ತಮಪಡಿಸಲು ಕ್ರಮವಹಿಸಲಾಗುವುದು.

ರಾಜ್ಯ ಸರ್ಕಾರದಿಂದ ಖಾಸಗಿ ಬಸ್‌ಗಳಲ್ಲಿ ಶಕ್ತಿ ಯೋಜನೆಯ ಮಹಿಳಾ ಪ್ರಯಾಣಿಕರಿಗೆ ಉಚಿತ ಬಸ್ ಪ್ರಯಾಣ ಕಲ್ಪಿಸುವ ಪ್ರಸ್ತಾವನೆ ಪ್ರಸ್ತುತ ಇರುವುದಿಲ್ಲ. ಶಕ್ತಿ ಯೋಜನೆಯು ಆರಂಭಿಕ ಹಂತದಲ್ಲಿರುವುದರಿಂದ ಸಾದಕ ಬಾದಕಗಳ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ: ಟಿಡಿ 229 ಟಿಸಿಕ್ಯೂ 2023

**(ರಾಮಲಿಂಗಾರೆಡ್ಡಿ)**

ಸಾರಿಗೆ ಮತ್ತು ಮುಜರಾಯಿ ಸಚಿವರು